<u>ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ,</u>
<u>ಮಾಗಡಿ.</u>

**<u>ಒ.ಎಸ್.441/2025</u>**

ದಿ:20.06.2026
PW-1

(ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು)

**<u>ಪಾಟೀ ಸವಾಲು: ವಾದಿ ಪರ ಶ್ರೀ ಆರ್.ಎಸ್ ವಕೀಲರಿಂದ:</u>**

ಈ ದಾವೆಯನ್ನು ಹೂಡವ ಸಮಯದಲ್ಲಿ ನಮ್ಮ ವಕೀಲರಿಗೆ ಮಾಹಿತಿಯನ್ನು ನೀಡಿರುತ್ತೇನೆ. ಪ್ರತಿವಾದಿಗಳು ತಕರಾರು ಹಾಕಿರುವುದನ್ನು ತಿಳಿದುಕೊಂಡಿರುತ್ತೀರಾ ಎಂದರೆ ಸಾಕ್ಷಿಯು ಅವರು ತಕರಾರು ಹಾಕಿಲ್ಲ ಎಂದು ನುಡಿಯುತ್ತಾರೆ. ದಾವಾ item No.1 ರಿಂದ 3 ನಮ್ಮ ಪಿತ್ರಾರ್ಜಿತ ಸ್ವತ್ತು ಎಂದರೆ ಸರಿ. ನನ್ನ ತಂದೆ ಬದುಕಿದ್ದಾಗ ದಾವಾ item No.1 ರಿಂದ 3 ಸ್ವತ್ತನ್ನು ನೋಡಿಕೊಳ್ಳುತ್ತಿದ್ದರು ಎಂದರೆ ಸಾಕ್ಷಿಯು ನಾನು ಕೂಡ ನೋಡಿಕೊಳ್ಳುತ್ತಿದ್ದೆ ಎಂದು ಸಾಕ್ಷ ನುಡಿಯುತ್ತಾರೆ. ದಾವಾ item No.3 ಸರ್ವೆ.ನಂ.144/2 ಎಂದು ಬರೆಸಿರುವುದು ತಪ್ಪು ಇರುತ್ತದೆ.

ನಾರಾಯಣರವರು 1987ರಿಂದ ಪ್ರಾಧ್ಯಾಪಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದರೆ ಸರಿ. ನನ್ನ ತಂದೆ 19.04.1999ರಲ್ಲಿ ತೀರಿಕೊಂಡಿರುತ್ತಾರೆ ಎಂದರೆ ಸರಿ. ಪ್ರತಿವಾದಿ 8ರವರು ಪೋಲಿಸ್ ಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದರು ಎಂದರೆ ಸರಿ.

**ಮುಂದುವರೆದ ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರಿದ್ದು, ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ.ಸರಿ ಇದೆ. ಎಂದು ಸಾಕ್ಷಿ ಒಪ್ಪಿರುತ್ತಾರೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ,
ಮಾಗಡಿ.